ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 65/2013

(ಫ್ರಾಸಾ-8 ಚಾಸಾ-13)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 04.08.2025

| | | |
|---|---|---|
| ಸಾಕ್ಷಿದಾರರ ಹೆಸರು | - | ಎ.ಪಿ. ಕುಮಾರ್ |
| ತಂದೆಯ ಹೆಸರು | - | ಪುಟ್ಟಸ್ವಾಮಾಚಾರ್ |
| ವಯಸ್ಸು | - | 51 ವರ್ಷ, |
| ಉದ್ಯೋಗ | - | ಪೋಲೀಸ್ ಇನ್ಸಪೆಕ್ಟರ್, ಬೆಂಗಳೂರು, |
| ವಾಸ | - | ಬೆಂಗಳೂರು |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ನಾನು ದಿನಾಂಕ 09.09.2008 ರಿಂದ ದಿಃ10.09.2012 ರವರೆಗೆ ತಲಘಟ್ಟಪುರ ಪೋಲಿಸ್ ಠಾಣೆಯಲ್ಲಿ ಪೋಲಿಸ್ ಸಬ್ ಇನ್ಸಪೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿದ್ದೆನು. ದಿನಾಂಕ 03.09.2012 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 03.30 ಘಂಟೆ ಸಮಯದಲ್ಲಿ ಸಿದ್ದಲಿಂಗಪ್ಪ ಆಸ್ಪತ್ರೆಯಲ್ಲಿ ಚಾಸಾ-1 ರವರ ಹೇಳಿಕೆಯ ದೂರನ್ನು ವೈದ್ಯರ ಸಮಕ್ಷಮ ಪಡೆದು ಠಾಣೆಗೆ ಸಂಜೆ 04.00 ಘಂಟೆಗೆ ಹಾಜರಾಗಿ ಠಾಣಾ ಮೊಕದ್ದಮೆ ಸಂಖ್ಯೆ 564/2012 ರಲ್ಲಿ ಪ್ರಥಮ ವರ್ತಮಾನ ವರದಿಯನ್ನು ನೊಂದಾಯಿಸಿರುತ್ತೇನೆ. ದೂರು ಮತ್ತು ಪ್ರ.ವ.ವರದಿಯನ್ನು ಠಾಣಾ ಸಿಬ್ಬಂದಿಯ ಮುಖಾಂತರ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿದ್ದು ಪ್ರತಿಗಳನ್ನು ಹಿರಿಯ ಅಧಿಕಾರಿಗೆ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಈ ಪ್ರಕರಣವು ಎಸ್ ಸಿ ಎಸ್ ಟಿ ಪ್ರಕರಣವಾದ್ದರಿಂದ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-16 ರವರಿಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿ ದೂರು ಮತ್ತು ತಮ್ಮ ಸಹಿ ನೋಡಿ ಗುರುತಿಸಿದ್ದು ದೂರು ಈಗಾಗಲೇ ನಿಪಿ-4 ಎಂದು ಗುರ್ತಿಸಲಾಗಿದ್ದು, ನಿಪಿ-4 ದೂರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ-4(ಬಿ) ಎಂದು ಗುರ್ತಿಸಲಾಯಿತು. ಪ್ರ.ವ.ವರದಿಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಪ್ರ.ವ.ವರದಿಯನ್ನು

ನಿಪಿ-6 ಎಂದು ಮತ್ತು ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ-6(ಎ) ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎ ಎ ವಕೀಲರಿಂದಃ**

2. ಪ್ರ.ವ.ವರದಿ ದಾಖಲು ಮಾಡಿದ್ದನ್ನು ಕೇಸ್ ಡೈರಿಯಲ್ಲಿ ನಮೂದು ಮಾಡಿರುತ್ತೇನೆ. ಚಾಸಾ-1 ಹೇಳಿಕೆಯ ದೂರು ನೀಡಲು ಸಮರ್ಥರಿದ್ದ ಬಗ್ಗೆ ನಾನು ವೈದ್ಯರಿಂದ ಹೇಳಿಕೆ ಪಡೆದಿಲ್ಲ. ಸಾಕ್ಷಿ ಮುಂದುವರಿದು ಚಾಸಾ-1 ರವರ ಹೇಳಿಕೆಯ ದೂರನ್ನು ವೈದ್ಯರ ಸಮಕ್ಷಮವೇ ಪಡೆದಿರುತ್ತೇನೆ. ಚಾಸಾ-1 ಇವರು ಆಸ್ಪತ್ರೆಯಲ್ಲಿ ನನ್ನ ಸಮಕ್ಷಮ ಯಾವುದೇ ಹೇಳಿಕೆಯ ದೂರನ್ನು ನೀಡದೇ ಇದ್ದರೂ ಸಹ ನಾನು ನಿಪಿ-4 ರಂತೆ ದೂರನ್ನು ಸುಳ್ಳು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ದೂರು ಸೃಷ್ಟಿಸಿ ಸುಳ್ಳು ಪ್ರ.ವ.ವರದಿ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ಸಾಕ್ಷಿ ಹೇಳಿದಂತೆ ಹೇಳಿಕೆಯನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು